**ದಿನಾಂಕ: 6.11.2021 ರಂದು ಸಮಯ 10.30 ಗಂಟೆಗೆ ವಾರ್ಡ್ 154–ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಗಿರೀಶ , ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ಬಾಲಕೃಷ್ಣ. ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–154.
5. ಶ್ರೀ. ರಮೇಶ್ ಅರಿಸಿಕೆರಿ, Water Inspector, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್–154
6. ಶ್ರೀ. ಮುನಿರಾಜು ಕೆ., ಕಿರಿಯ ಅಭಿಯಂತರರು, BESCOM ವಾರ್ಡ್ 154
7. ಶ್ರೀ. ಎನ್. ನಾರಾಯಣ, ಕಂದಾಯ ಪರಿವೀಕ್ಷಕರು, ವಾರ್ಡ್ 154
8. ಶ್ರೀ. ಗೋಪಾಲಕೃಷ್ಣ, ಕಂದಾಯ ವಸೂಲಿಗಾರರು ವಾರ್ಡ್ 154

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸುತ್ತ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ಬುಗಲ್ ರಾಕ್ ಉದ್ಯಾನವನದಲ್ಲಿರುವ ಸಾರ್ವಜನೀಕ ಶೌಚಾಲಯವನ್ನು ಎರಡು ಮೂರು ದಿನಗಳಿಂದ ತೆರೆಯುತ್ತಿಲ್ಲ ಸದರಿ ಶೌಚಾಲಯವನ್ನು ನಿಗಧಿತ ಸಮಯದಲ್ಲಿ ಓಪನ್ ಮಾಡಲು ಕ್ರಮಕೈಗೊಳ್ಳಲು ಸೂಚಿಸಿರುತ್ತಾರೆ.

**ಕ್ರಮ: ವಾರ್ಡಿನ ಹಿರಿಯ ಆರೋಗ್ಯ ಪರಿವೀಕ್ಷಕರು , ಸಹಾಯಕ ಅಭಿಯಂತರರು ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ**

ನೋಡಲ್ ಅಧಿಕಾರಿಗಳು ಮಾತನಾಡಿ 10ನೇ ಕ್ರಾಸ್ ತ್ಯಾಗರಾಜನಗರದಲ್ಲಿ ಕೊಳವೆಬಾವಿನಿಂದ ನೀರು ಸರಬರಾಜು ಆಗುತ್ತಿದ್ದು ಮಧ್ಯದಲ್ಲಿ ಪೈಪ್ ಮುರಿದುಹೋಗಿರುವುದರಿಂದ ನೀರು ಟ್ಯಾಂಕಿಗೆ ಬರುವುದು ನೀತುಹೋಗಿರುತ್ತದೆ ಇದನ್ನು ಸರಿಡಿಸಲು ಕ್ರಮಕೈಗೊಳ್ಳಲು ಸೂಚಿಸಿರುತ್ತಾರೆ.

**ಕ್ರಮ: – ಸಹಾಯಕ ಅಭಿಯಂತರರು ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಎನ್.ಆರ್.ಕಾಲೋನಿಯಲ್ಲಿರುವ ಸ್ಕೈವಾಕ್ ಕಾಮಗಾರಿಯು ತುಂಬ ದಿನಗಳಿಂದ ನಿಲ್ಲಿಸಿದ್ದು ಸದರಿ ಸ್ಕೈವಾಕ್ ಕಾಮಗಾರಿಯನ್ನು ಬೇಗನೇ ಮುಗಿಸಲು ಕ್ರಮ ಕೈಗೊಳ್ಳಲು ಸಂಬಂಧಪಟ್ಟವರಿಗೆ ಸೂಚಿಸುವುದು.

**ಕ್ರಮ: – ಸಹಾಯಕ ಅಭಿಯಂತರರು ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

>>>>2

ನೋಡಲ್ ಅಧಿಕಾರಿಗಳು ಮಾತನಾಡಿ ಕಡಲೆಕಾಯಿ ಪರಿಷೆಯಲ್ಲಿ ಸಾರ್ವಜನೀಕರು ತಮ್ಮ ವಾಹನಗಳನ್ನು ನಿಲ್ಲಿ ಸಲು ಸೂಕ್ತ ವ್ಯವಸ್ತೆ ಯಾಗುವಂತೆ ಸಂಚಾರಿ ಠಾಣಾದಿಕಾರಿಗಳಿಗೆ ಸೂಚಿಸಿದರು

**ಕ್ರಮ:- ಸಂಚಾರಿ ಪೋಲೀಸ್**

ನೋಡಲ್ ಅಧಿಕಾರಿಗಳು ಮಾತನಾಡಿ ಕಡಲೆಕಾಯಿ ಪರಿಷೆಯಲ್ಲಿ ಮಾರ್ಷಲ್‌ಗಳನ್ನು ದೆಪ್ಲೋಯ್ ಮಾಡಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: - ಹಿರಿಯ ಆರೋಗ್ಯ ಪರಿವೀಕ್ಷಕರು ,**
**ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ**

ನೋಡಲ್ ಅಧಿಕಾರಿಗಳು ಮಾತನಾಡಿ ಸಿಟಿ ಬೆಡ್‌ನಲ್ಲಿ ಬೃಹತ್ ಮಳೆನೀರು ಗಾಲುವೆ ದುರಸ್ತಿ ಕಾಮಗಾರಿ ನಡೆಯುತ್ತಿದ್ದು ಸದರಿ ಮಳೆನೀರು ಗಾಲುವೆಯ ಪಕ್ಕದಲ್ಲಿ ರಸ್ತೆಯು ಕುಸಿದಿರುತ್ತದೆ ಆದುದರಿಂದ ಸದರಿ ಭಾಗವನ್ನು ತುಂಬಿ ಕಾಂಕ್ರೀಟ್ ಹಾಕಿಕೊಡಲು ಸಾರ್ವಜನೀಕರು ವಿನಂತಿಸಿರುತ್ತಾರೆ ಆದುದರಿಂದ ಸದರಿ ದರಸ್ತಿ ಕಾರ್ಯವನ್ನು ಶೀಘ್ರವಾಗಿ ಕೈಗೊಳ್ಳಲು ಸೂಚಿಸಿರುತ್ತಾರೆ.

**ಕ್ರಮ: - ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಬೃಹತ್ ಮಳೆನೀರು ಗಾಲುವೆ(ದಕ್ಷಿಣ) ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

6/11

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ 154-ಬಸವನಗುಡಿ

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
9) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
10) ಕಛೇರಿ ಕಡತಕ್ಕೆ.